ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	1331
ಸದಸ್ಯರ ಹೆಸರು	ಶ್ರೀ. ಯು.ಬಿ. ವೆಂಕಟೇಶ್
ಉತ್ತರಿಸುವ ದಿನಾಂಕ	24-12-2021
ಉತ್ತರಿಸುವ ಸಚಿವರು	ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕೋವಿಡ್-19 ಅವಧಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನೀಡಲಾಗುವ ಯೋಜನೆಗಳು ಕುಂಠಿತಗೊಂಡಿದ್ದು, ಸದರಿ ಯೋಜನೆಗಳನ್ನು ಪ್ರಸ್ತುತ ಸಾಲಿನಲ್ಲಿ ಮುಂದುವರೆಸಲು ಕ್ರಮ ಕೈಗೊಳ್ಳಲಾಗಿದೆಯೇ:	ಕೋವಿಡ್-19 ಅವಧಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅನುಷ್ಟಾನ ಮಾಡುತ್ತಿರುವ ಯಾವುದೇ ಯೋಜನೆಗಳು ಕುಂಠಿತಗೊಂಡಿರುವುದಿಲ್ಲ. ಆದರೆ, ಕೋವಿಡ್-19 ಹಿನ್ನೆಲೆಯಲ್ಲಿ ನಿಗಮಗಳಿಂದ ಅನುಷ್ಟಾನ ಮಾಡುತ್ತಿರುವ ಸ್ವಯಂ ಉದ್ಯೋಗ ಯೋಜನೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸಹಾಯಧನ ಮೊತ್ತವನ್ನು ಪರಿಷ್ಕರಿಸಲಾಗಿದೆ. ಅದರಂತೆ, ಎಲ್ಲಾ ಯೋಜನೆಗಳು ಮುಂದುವರೆದಿರುತ್ತವೆ.
ಆ)	ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಹಂಚಿಕೆಯಾದ ಹಣ ಮತ್ತು ಖರ್ಚಾದ ಹಣವೆಷ್ಟು:	ಎರಡು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಹಂಚಿಕೆಯಾದ ಮತ್ತು ವೆಚ್ಚವಾದ ಅನುದಾನದ ವಿವರ ಈ ಕೆಳಗಿನಂತಿದೆ. (ರೂ.ಕೋಟಿಗಳಲ್ಲಿ) ವರ್ಷ / ಹಂಚಿಕೆ / ವೆಚ್ಚ / % 2019-20 / 4231.72 / 4188.58 / 98.98 2020-21 / 3349.58 / 3276.08 / 97.81
ಇ)	ಯಾವ ಯಾವ ಯೋಜನೆಗಳನ್ನು ಸ್ಥಗಿತಗೊಳಿಸಲಾಗಿತ್ತು.	ಕೋವಿಡ್-19 ಹಿನ್ನೆಲೆಯಲ್ಲಿ ಯಾವುದೇ ಯೋಜನೆಗಳನ್ನು ಸ್ಥಗಿತಗೊಳಿಸಿರುವುದಿಲ್ಲ.
ಈ)	ಪ್ರಸ್ತುತ ಎಲ್ಲಾ ಯೋಜನೆಗಳನ್ನು ಮುಂದುವರೆಸಲಾಗಿದೆಯೇ?	ಹೌದು

(ರೂ.ಕೋಟಿಗಳಲ್ಲಿ)

ವರ್ಷ	ಹಂಚಿಕೆ	ವೆಚ್ಚ	%
2019-20	4231.72	4188.58	98.98
2020-21	3349.58	3276.08	97.81

ಸಂಖ್ಯೆ:ಸಕಇ 233 ಆರ್& ಐ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.